ಅ) 1994-95ನೇ ಸಾಲಿನ ಕೊನೆಗೆ ಮಂಡ್ಯ ಜಿಲ್ಲಾ ಪಂಚಾಯತ್‌ನಲ್ಲಿ ಗುತ್ತಿಗೆದಾರರಿಗೆ ರಸ್ತೆಗಳ ಬಾಬ್ತು ನೀಡಬೇಕಾಗಿದ್ದಂತಹ ಬಿಲ್ಲುಗಳ ಮೊತ್ತ 136.02 ಲಕ್ಷ ರೂ.ಗಳು ಇದರಲ್ಲಿ ದಿನಾಂಕ 1.4.1995ರಿಂದ 31.7.95 ರವರೆಗೆ 65.61 ಲಕ್ಷ ರೂ.ಗಳ ಬಿಲ್ಲುಗಳನ್ನು ಪಾವತಿ ಮಾಡಿದ್ದು, ದಿನಾಂಕ 1.8.1995ಕ್ಕೆ ಬಾಕಿ ಇರುವ ಬಾಬ್ತು 68.41 ಲಕ್ಷ ರೂ.ಗಳು ಎಂದು ಜಿಲ್ಲಾ ಪಂಚಾಯತ್ ಪತಿಯಿಂದ ತಿಳಿಸಿರುತ್ತಾರೆ.

ಆ) ಸದರಿ ವಿಷಯದಲ್ಲಿ ಸರ್ಕಾರದ ಬಳಿ ಯಾವುದೇ ಮಾಹಿತಿ ಇರುವುದಿಲ್ಲ.

ಇ) ರಸ್ತೆ ಕೆಲಸ ಮಾಡದೇ ಹಣ ಪಡೆದಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಲ್ಲಿ, ನಿಯಮಗಳ ರೀತ್ಯ ಕ್ರಮ ತೆಗೆದುಕೊಳ್ಳಲಾಗುತ್ತದೆ.

ಕಿರುಗಾವಲು ಕ್ಷೇತ್ರದಲ್ಲಿ ನ್ಯಾಯಬೆಲೆ ಅಂಗಡಿಗಳು

1920 - ಶ್ರೀ ಕೆ.ಎನ್. ನಾಗೇಗೌಡ (ಕಿರುಗಾವಲು) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮಂಡ್ಯ ಜಿಲ್ಲೆ ಕಿರುಗಾವಲು ಕ್ಷೇತ್ರದಲ್ಲಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು?*

ಆ) *ಹಾಗಿದ್ದಲ್ಲಿ, ಇವುಗಳ ಪೈಕಿ ದೂರುಗಳು ಬಂದ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು? ಅವುಗಳ ಮೇಲೆ ತೆಗೆದುಕೊಂಡ ಕ್ರಮಗಳೇನು?*

ಇ) *ಕಿರುಗಾವಲು ಹೋಬಳಿ, ಆಲದ ಹಳ್ಳಿ ನ್ಯಾಯಬೆಲೆ ಅಂಗಡಿಯ ಪ್ರಕರಣದ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?*

ಶ್ರೀ ಎಸ್. ನಂಜಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ) 55

ಆ) 4. ಈ ಅಂಗಡಿಗಳ ಪ್ರಾಧಿಕಾರವನ್ನು ಅಮಾನತ್ತು ಪಡಿಸಲಾಗಿದೆ.

ಇ) ಕಿರುಗಾವಲು ಹೋಬಳಿ ಆಲದ ನ್ಯಾಯಬೆಲೆ ಅಂಗಡಿಯ ಪ್ರಾಧಿಕಾರವನ್ನು ಅಮಾನತ್ತು ಪಡಿಸಿದೆ. ಈ ಬಗ್ಗೆ ನ್ಯಾಯಬೆಲೆ ಅಂಗಡಿ ಮಾಲೀಕರು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ನಂ. 27903 :95 ಸಲ್ಲಿಸಿದ್ದು, ಸದರಿ ಪ್ರಕರಣದ ಬಗ್ಗೆ ಉಚ್ಚ ನ್ಯಾಯಾಲಯ ಆದೇಶವನ್ನು ಕಾಯಲಾಗಿದೆ.

ಕರ್ನಾಟಕ ಹಾಲು ಮಹಾ ಮಂಡಲಿಗೆ ಸಹಾಯಧನ

1906 - ಶ್ರೀ ಕೆ.ಎನ್. ನಾಗೇಗೌಡ (ಕಿರುಗಾವಲು) : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1993-94ನೇ ಸಾಲಿನಲ್ಲಿ ರಾಜ್ಯ ಸರ್ಕಾರವು ಕರ್ನಾಟಕ ಹಾಲು ಮಹಾ ಮಂಡಳಿಗೆ ರೂ. 5.50 ಕೋಟಿಗಳನ್ನು ಸಹಾಯಧನ ರೂಪದಲ್ಲಿ ಮಂಜೂರು ಮಾಡಲಾಗಿದೆಯೇ?*

ಆ) *ರಾಜ್ಯ ಸರ್ಕಾರದಿಂದ ಕರ್ನಾಟಕ ಹಾಲು ಮಹಾ ಮಂಡಳಿಗೆ ಬಿಡುಗಡೆಯಾಗಬೇಕಾಗಿರುವ ಬಾಕಿ ಹಣ ಎಷ್ಟು?*

ಶ್ರೀ ಬಿ.ಎನ್. ಬಚ್ಚೇಗೌಡ (ಪಶುಸಂಗೋಪನಾ ರಾಜ್ಯ ಸಚಿವರು) :

ಅ) 1993-94ನೇ ಸಾಲಿನಲ್ಲಿ ಕರ್ನಾಟಕ ಹಾಲು ಮಹಾ ಮಂಡಳಿಗೆ ಸರ್ಕಾರವು ಈ ಕೆಳಕಾಣಿಸಿದಂತೆ ಹಣ ಬಿಡುಗಡೆ ಮಾಡಿದೆ.